ಕರ್ನಾಟಕ ಸರ್ಕಾರ

**ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ ನೃಪತುಂಗ ರಸ್ತೆ, ಬೆಂಗಳೂರು-01**

ಸಂಖ್ಯೆ:ಎಡಿಎ2(4)127/2026-27/2112866 ದಿನಾಂಕ:15/04/2026

## : ಸುತ್ತೋಲೆ :

ವಿಷಯ: ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳಲ್ಲಿ ಪ್ರತಿ ನಿತ್ಯವೂ ಬೆಳಗಿನ ಪ್ರಾರ್ಥನ ಸಮಯದ ನಂತರ ವಿದ್ಯಾರ್ಥಿಗಳಿಂದ ಹತ್ತು ನಿಮಿಷಗಳ ಕಾಲ ಕನ್ನಡ ದಿನ ಪತ್ರಿಕೆಯನ್ನು ಓದಿಸುವ ಬಗ್ಗೆ.

ಉಲ್ಲೇಖ: ಸರ್ಕಾರಿ ಆದೇಶ ಸಂಖ್ಯೆ: ಇಪಿ 351 ಪಿಜಿಸಿ 2025 ದಿನಾಂಕ: 19.02.2026ರ ಪತ್ರದೊಂದಿಗೆ ಲಗತಗೊಳಿಸಿರುವ ಅಧ್ಯಕ್ಷರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರುರವರ ಪತ್ರದ ಸಂಖ್ಯೆ: ಕರಾಮಹರಆ/ದಿನಪತ್ರಿಕೆ/ಹವ್ಯಾಸ/12/2025/1480 ದಿನಾಂಕ:29.12.2025.

***

ವಿಷಯಕ್ಕೆ ಸಂಬಂಧಿಸಿದಂತೆ, ಇಂದಿನ ಡಿಜಿಟಲ್ ಯುಗದಲ್ಲಿ ಮಕ್ಕಳು ಇಂಟರ್ ನೆಟ್ ಶಿಕ್ಷಣ, ಮನರಂಜನೆ ಮತ್ತು ಸಾಮಾಜಿಕ ಜಾಲತಾಣಗಳಿಗೆ ಹೆಚ್ಚಿನ ಸಮಯಾವಕಾಶ ನೀಡುತ್ತಿದ್ದಾರೆ ಮತ್ತು ಅತಿಯಾದ ಮೊಬೈಲ್ ಬಳಕೆಯಿಂದ ಮಕ್ಕಳಲ್ಲಿ ಜ್ಞಾಪಕ ಶಕ್ತಿಯ ಕೊರತೆ, ಶ್ರವಣದೋಷ ಮತ್ತು ದೈಹಿಕ ಚಟುವಟಿಕೆಗಳಲ್ಲಿ ಆಸಕ್ತಿ ಇಲ್ಲದೇ ಇರುವಂತಹ ಲಕ್ಷಣಗಳು ಕಂಡು ಬರುತ್ತಿವೆ. ಆದ್ದರಿಂದ ಮಕ್ಕಳು ಶಾಲೆಗಳಲ್ಲಿ ದಿನ ನಿತ್ಯವೂ ಕನಿಷ್ಠ 10 ರಿಂದ 15 ನಿಮಿಷ ದಿನಪತ್ರಿಕೆಗಳನ್ನು ಓದುವ ಅಭ್ಯಾಸ ಬೆಳೆಸಿಕೊಂಡಲ್ಲಿ, ಸ್ಪರ್ಧಾತ್ಮಕ ಪರೀಕ್ಷೆಗೆ ಬೇಕಾದ ಸಿದ್ಧತೆ, ಪ್ರಚಲಿತ ವಿದ್ಯಮಾನಗಳ ಸಾಮಾನ್ಯ ಜ್ಞಾನ ವೃದ್ಧಿಸಿಕೊಳ್ಳಲು ಮತ್ತು ಶಬ್ದಕೋಶ, ಭಾಷಾ ಶೈಲಿ ಮತ್ತು ಬರವಣಿಗೆಯ ಕೌಶಲ್ಯಗಳನ್ನು ಸುಧಾರಿಸಲು ಇದು ಸಹಕಾರಿಯಾಗುತ್ತದೆಂದು ಅಧ್ಯಕ್ಷರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಬೆಂಗಳೂರುರವರು ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಾ.ಶಿ.ಇ. ಬೆಂಗಳೂರುರವರಲ್ಲಿ ಮನವಿ ಸಲ್ಲಿಸಿರುವ ಹಿನ್ನೆಲೆಯಲ್ಲಿ, ಈ ಸಂಬಂಧವಾಗಿ ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಪತ್ರದಲ್ಲಿನ ಅಂಶಗಳನ್ನು ನಿಯಮಾನುಸಾರ ಪರಿಶೀಲಿಸಿ ಅಗತ್ಯ ಕ್ರಮಕ್ಕೈಗೊಳ್ಳುವಂತೆ ನಿರ್ದೇಶನವಿರುತ್ತದೆ.

ಈ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳಲ್ಲಿ ಮತ್ತು ಸರ್ಕಾರದ ವಿವಿಧ ಇಲಾಖೆಗಳಿಂದ ನಡೆಯುತ್ತಿರುವ ವಸತಿ ಶಾಲೆ, ನಿಲಯಗಳು/ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ಪ್ರತಿ ನಿತ್ಯವೂ ಶಾಲೆಗಳಲ್ಲಿ ಬೆಳಗಿನ ಪ್ರಾರ್ಥನ ಸಮಯದ ನಂತರ ಮಕ್ಕಳಿಂದ ಹತ್ತು ನಿಮಿಷಗಳ ಕಾಲ ಕಡ್ಡಾಯವಾಗಿ ಕನ್ನಡ ದಿನಪತ್ರಿಕೆ ಓದುವ ಅಭ್ಯಾಸವನ್ನು ಅನುಷ್ಠಾನಗೊಳಿಸುವಂತೆ ಈ ಮೂಲಕ ತಿಳಿಸಿದೆ.

(ಮಾನ್ಯ ಆಯುಕ್ತರ ಆದೇಶದ ಮೇರೆಗೆ)

15/4/2026

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)

ಇವರಿಗೆ:

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ, ರವರ ಸೂಕ್ತ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ ರವರಿಗೆ [ಸಂಬಂಧಿಸಿದ ಉಪನಿರ್ದೇಶಕರುಗಳ ಮುಖಾಂತರ).
3. ರಾಜ್ಯದ ಎಲ್ಲಾ ಶಾಲಾ ಮುಖ್ಯಸ್ಥರಿಗೆ (ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ).
4. ಕಛೇರಿ ಪ್ರತಿ.

ಪ್ರತಿಯನ್ನು ಗೌರವಗಳೊಂದಿಗೆ.

1. ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ ಬೆಂಗಳೂರು-560001ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಅಧ್ಯಕ್ಷರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಬೆಂಗಳೂರು (4ನೇ ಮಹಡಿ, ಕೃಷಿ ಭವನ, ನೃಪತುಂಗ ರಸ್ತೆ, ರಾಣಿ ಚೆನ್ನಮ್ಮ ವೃತ್ತ, ಬೆಂಗಳೂರು-560001) ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.

ಪತ್ರ ಸಂಖ್ಯೆ: 69

ದಿನಾಂಕ: 21/4/26

ವಿಷಯ ನಿರ್ವಾಹಕರು